ಶ್ರೀ ಧರ್ಮಸಿಂಗ್(ಮುಖ್ಯ ಮಂತ್ರಿಗಳು) :

ಅ) ಕೆ.ಆರ್ ವೃತ್ತದಲ್ಲಿ 4 ಜಾಗದಲ್ಲಿ ರಸ್ತೆ ಪಾದಾಚಾರಿಗಳಿಗೆ ಸಬ್‌ವೇ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಸದರಿಕಾಮಗಾರಿಗೆ ಸೂಕ್ತ ಯೋಜನಾ ವರದಿ ತಯಾರಿಸಿ ಕೊಡಲು ಕನ್ಸಲ್ಟೆಂಟ ರವರುಗಳಿಂದ ಟೆಂಡರ್ ಕರೆಯಲಾಗಿದ್ದು, ಸರಿಯಾದ ತಾಂತ್ರಿಕ ಬಿಡ್ ನೀಡದೆ ಇದ್ದುದರಿಂದ ಈ ಟೆಂಡರ್‌ಗಳನ್ನು ತಿರಸ್ಕರಿಸಲಾಗಿದೆ. ಈಗ ಹೊಸದಾಗಿ ಟೆಂಡರ್ ಕರೆಯುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಟೆಂಡರ್ ಕರೆದು ಕಾರ್ಯ ಸಾಧು ವರದಿ ನೀಡಿದ ನಂತರ ಅಂದಾಜನ್ನು ತಯಾರಿಸಲಾಗುವುದು.

ಇ) ಕಾರ್ಯ ಸಾಧು ವರದಿ ತಯಾರಾದ ಮೇಲೆ ಈ ಬಗ್ಗೆ ನಿರ್ಧರಿಸಲಾಗುವುದು.

1048(233) ಶ್ರೀ ಶಶಿಕಾಂತ್ ಅಕ್ಕಪ್ಪ ನಾಯಕ್ (ಹುಕ್ಕೇರಿ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಹುಕ್ಕೇರಿ ಮತಕ್ಷೇತ್ರದಲ್ಲಿ ಬಸ್ ಸಂಚಾರ ಸಮರ್ಪಕವಾಗಿ ಇಲ್ಲದೇ ಸಾರ್ವಜನಿಕರು ಖಾಸಗಿ ವಾಹನಗಳಲ್ಲಿ ಮಿತಿಮೀರಿದ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ತುಂಬುತ್ತಿರುವುದರಿಂದ ಅದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಆ) ಈ ಭಾಗದಲ್ಲಿ ಖಾಸಗಿ ವಾಹನಗಳ ಸಂಚಾರ ತಡೆಗಟ್ಟಲು ಸರ್ಕಾರ ಹಾಕಿ ಕೊಂಡಿರುವ ಕಾರ್ಯಕ್ರಮಗಳೇನು?

ಇ) ಸಾರಿಗೆ ಸಂಸ್ಥೆಯು ವಾಹನಗಳ ಕಾರ್ಯಚರಣೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಖಾಸಗಿ ವಾಹನಗಳ ತಪಾಸಣೆ ನಡೆಸಿ ಮಿತಿಮೀರಿದ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ತುಂಬಿರುವ ವಾಹನಗಳ ವಿರುದ್ಧ ಕಾನೂನಿನ್ವಯ ಪ್ರಕರಣ ದಾಖಲಿಸಲಾಗಿದೆ.

ಆ) ತಪಾಸಣೆ ಕ್ರಮ ಕೈಗೊಳ್ಳಲಾಗುವುದು.

ಇ) ಗೋಕಾಕ್ ಸಂಕೇಶ್ವರ ಮತ್ತು ಚಿಕ್ಕೋಡಿ ಘಟಕಗಳಿಂದ ಈಗಾಗಲೇ ಆಚರಣೆ ಮಾಡುತ್ತಿರುವ 360 ಸುತ್ತುವಳಿಗಳ ಜೊತೆಗೆ ಹೆಚ್ಚುವರಿಯಾಗಿ 20 ಸುತ್ತುವಳಿಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

1049(241) ಶ್ರೀ ಶಶಿಕಾಂತ್ ಅಕ್ಕಪ್ಪ ನಾಯಕ್ (ಹುಕ್ಕೇರಿ) : ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಂಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕರ್ನಾಟಕ–ಮಹಾರಾಷ್ಟ್ರ ನಡುವಿನ ಗಡಿ ಸಮಸ್ಯೆ ಇತ್ಯರ್ಥಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಇದಕ್ಕಾಗಿ ನೇಮಕಗೊಂಡಿರುವ ದಾತಾರ್ ಸಮಿತಿಗೆ ಹೆಚ್ಚಿನ ಅಧಿಕಾರ ಹಾಗೂ ಸೌಲಭ್ಯದ ಕೊರತೆ ಇರುವುದು ನಿಜವೇ?